ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ.,
ನ್ಯಾಯಾಲಯ, ಚಿಕ್ಕಮಗಳೂರು.

<u>ಸಿ.ಸಿ.1344/2021</u>

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಶಂಭುಲಿಂಗಯ್ಯ ಎಂ.ಇ | ಪಿ.ಡಬ್ಲ್ಯೂ.10 |
| ತಂದೆಯ ಹೆಸರು | : | ಈರಯ್ಯ | ಸಿ.ಡಬ್ಲ್ಯೂ.14 |
| ವಯಸ್ಸು | : | 34 ವರ್ಷ | |
| ವೃತ್ತಿ | : | ಪಿ.ಎಸ್.ಐ, ಮಣಿಪಾಲ ಪೊಲೀಸ್ ಠಾಣೆ | |
| ವಾಸ | : | ಉಡುಪಿ | |

<u>ಸಾಕ್ಷಿಯನ್ನು ವಿ.ಸಿ. ಮುಖಾಂತರ ದಿನಾಂಕಃ 08-07-2026 ರಂದು ಪ್ರಮಾಣ ವಚನ ಭೋದಿಸಲಾಯಿತು.</u>

<u>ಮುಖ್ಯ ವಿಚಾರಣೆಃ ಅಭಿಯೋಜನೆ ಪರ ಮಾನ್ಯ ಎಪಿಪಿ ರವರಿಂದಃ-</u>

ನಾನು ದಿಃ09.04.2021 ರಿಂದ ದಿಃ19.01.2022 ರವರೆಗೆ ಚಿಕ್ಕಮಗಳೂರಿನ ನಗರ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ22.07.2021 ರಂದು ಈ ಪ್ರಕರಣದ ಕಡತವನ್ನು ಚಾಸಾ-13 ರವರಿಂದ ಮುಂದಿನ ತನಿಖೆಗಾಗಿ ಪಡೆದಿರುತ್ತೇನೆ. ಅದೇ ದಿನ ಎಫ್.ಎಸ್.ಎಲ್ ವರದಿಯನ್ನು ಪಡೆದಿರುತ್ತೇನೆ. ಸದರಿ ಎಫ್.ಎಸ್.ಎಲ್ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ-22 ಎಂದು ಗುರುತಿಸಲಾಗಿ ನನ್ನ ಸಹಿ ನಿಪಿ-22(ಎ) ಇರುತ್ತದೆ. ಅದೇ ದಿನ ಚಾಸಾ-11 ರವರು ನೀಡಿದ

ಪತ್ರಾಂಕಿತ ಅಧಿಕಾರಿಯ ಬಗ್ಗೆ ನೀಡಿದ ವರದಿಯನ್ನು ಸ್ವೀಕರಿಸಿರುತ್ತೇನೆ. ಸದರಿ ವರದಿಯನ್ನು ಅದನ್ನು ಈಗಾಗಲೇ ನಿಪಿ-21 ಎಂದು ಗುರುತಿಸಲಾಗಿದ್ದು ನನ್ನ ಸಹಿ ನಿಪಿ-21(ಬಿ) ಇರುತ್ತದೆ. ಮು.ಮಾ.1 ಮತ್ತು 2 ನ್ನು ನೋಡಿದರೆ ಗುರುತಿಸುತ್ತೇನೆ. ನಂತರ ತನಿಖೆಯನ್ನು ಪೂರ್ಣಗೊಳಿಸಿ ಆರೋಪಿತರ ವಿರುದ್ಧ ದೋಷಾರೋಪಣೆ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ-

ನಾನು ಎಫ್.ಎಸ್.ಎಲ್ ವರದಿಯನ್ನು ಸ್ವೀಕರಿಸಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅದೇ ರೀತಿ ಚಾಸಾ-11 ರವರಿಂದ ನಾನು ವರದಿಯನ್ನು ಪಡೆದಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಸರಿಯಾಗಿ ತನಿಖೆಯನ್ನು ನಡೆಸದೇ ಆರೋಪಿತರ ವಿರುದ್ಧ ಸುಳ್ಳು ದೋಷಾರೋಪಣೆ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲಾ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓಃಹೇಃಕೇಃಸಃಇಃಎಃಒಃ

Sd/-
(ಕುಮಾರಿ ಸುಜಾತ)
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಸಿ.ಜೆ.ಎಂ.,ಚಿಕ್ಕಮಗಳೂರು.

ಎಸ್ಆರ್ಃ